Bangalore
Regional News
28.08.2025: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು:

1. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ; ಆಸ್ತಿ ಮುಟ್ಟುಗೋಲು ಹಾಕಿದ ಜಾರಿ ನಿರ್ದೇಶನಾಲಯ
2. ಚಾಮುಂಡಿ ಬೆಟ್ಟ ವಿವಾದ; ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆ ಹಿಂಪಡೆಯುವಂತೆ ಬಿಜೆಪಿ ಆಗ್ರಹ
3. ಚಾರ್ಮಾಡಿ ಘಾಟ್‌ನಲ್ಲಿ ರಾತ್ರಿ ವೇಳೆ ಸಂಚರಿಸುವ ವಾಹನಗಳಿಗೆ ನೂತನ ನಿಯಮ
4. ರಾಜ್ಯದ ವಿವಿಧೆಡೆ ಧಾರಾಕಾರ ಮಳೆ; ಕರಾವಳಿ, ಮಲೆನಾಡಿನಲ್ಲಿ ಜನಜೀವನ ಅಸ್ತವ್ಯಸ್ತ
5. ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್; ಫೈನಲ್‌ನಲ್ಲಿಂದು ಹುಬ್ಬಳ್ಳಿ ಟೈಗರ್ಸ್ -ಮಂಗಳೂರು ಡ್ರ್ಯಾಗನ್ಸ್ ಮುಖಾಮುಖಿ

*********

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಬಹುಕೋಟಿ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಜಾರಿ ನಿರ್ದೇಶನಾಲಯ ಸುಮಾರು ೫ ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ. ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ನೆಕ್ಕುಂಟಿ ನಾಗರಾಜ್, ಚಂದ್ರಮೋಹನ್, ಗೋಲಪಲ್ಲಿ ಕಿಶೋರ್ ರೆಡ್ಡಿ ಮತ್ತು ಎಟಕೇರಿ ಸತ್ಯನಾರಾಯಣ ಅವರಿಗೆ ಸೇರಿದ ಆಸ್ತಿಗಳನ್ನು ಜಪ್ತಿ ಮಾಡಲಾಗಿದೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ. ೪.೫ ಕೋಟಿ ರೂಪಾಯಿ ಮೌಲ್ಯದ ಜಮೀನು ಹಾಗೂ ಫಸ್ಟ್ ಫೈನಾನ್ಸ್ ಕ್ರೆಡಿಟ್ ಕೋ-ಆಪರೇಟಿವ್ ಬ್ಯಾಂಕ್‌ನಲ್ಲಿ ಇದ್ದ ೫೦ ಲಕ್ಷ ರೂ. ನಗದನ್ನು ಜಪ್ತಿ ಮಾಡಲಾಗಿದೆ.

*********

ಚಾಮುಂಡಿ ಬೆಟ್ಟ ಕೇವಲ ಹಿಂದೂಗಳ ಆಸ್ತಿಯಲ್ಲ ಎಂಬ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೀಡಿದ ಹೇಳಿಕೆ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಈ ಕುರಿತು ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸತ್ಯ ಹೇಳಿದರೆ ಕೆಲವರು ಸಹಿಸುವುದಿಲ್ಲ, ಹೀಗಾಗಿ ತಾವು ಮಾತನಾಡದಿರುವುದೇ ಉತ್ತಮ ಎಂದು ಹೇಳಿದ್ದಾರೆ. ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಬಿಜೆಪಿ

ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕೂಡಲೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ಹೇಳಿಕೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ. ಇನ್ನೊಂದೆಡೆ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ, ಧರ್ಮಸ್ಥಳ, ಚಾಮುಂಡಿಬೆಟ್ಟ ಹಾಗೂ ಹಿಂದೂಗಳನ್ನು ಅವಹೇಳನ ಮಾಡುವ ಮೂಲಕ ಕಾಂಗ್ರೆಸ್ ಸರ್ಕಾರ ಜನರ ಭಾವನೆಗಳಿಗೆ ನೋವುಂಟು ಮಾಡಿದೆ ಎಂದು ದೂರಿದ್ದಾರೆ. ಚಾಮುಂಡಿ ಬೆಟ್ಟ ವಕ್ಫ್ ಬೋರ್ಡ್ ಆಸ್ತಿನಾ ಎಂದು ಅಶೋಕ ಪ್ರಶ್ನಿಸಿದ್ದಾರೆ.

*********

ಚಿಕ್ಕಮಗಳೂರು ಜಿಲ್ಲೆಯ ಚಾರ್ಮಾಡಿ ಘಾಟ್ ಮೂಲಕ ರಾತ್ರಿ ವೇಳೆ ಸಂಚರಿಸುವ ವಾಹನಗಳಿಗೆ ನೂತನ ನಿಯಮಗಳನ್ನು ಜಾರಿಗೊಳಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ತಿಳಿಸಿದ್ದಾರೆ. ಚಿಕ್ಕಮಗಳೂರು- ದಕ್ಷಿಣ ಕನ್ನಡ ಜಿಲ್ಲೆಗಳನ್ನು ಬೆಸೆಯುವ ಮಾರ್ಗದಲ್ಲಿ ಗೋವುಗಳ ಕಳ್ಳತನ, ಆಕ್ರಮ ಮರಳು ಸಾಗಾಣೆ ಇನ್ನಿತರೆ ಅಪರಾಧ ಪ್ರಕರಣಗಳು ಕೇಳಿಬಂದಿವೆ. ಇದರಿಂದ ಅಪರಾಧ ತಡೆ ಹಾಗೂ ರಾತ್ರಿ ವೇಳೆ ಸಂಚರಿಸುವ ವಾಹನ ಸವಾರರ ಸುರಕ್ಷತೆಯ ದೃಷ್ಠಿಯಿಂದ ನಿಯಮ ರೂಪಿಸಲಾಗಿದೆ ಎಂದು ಹೇಳಿದ್ದಾರೆ. ರಾತ್ರಿ ವೇಳೆ ಪ್ರತಿ ವಾಹನಗಳನ್ನು ಕೊಟ್ಟಿಗೆಹಾರದಲ್ಲಿರುವ ಚೆಕ್ ಪೋಸ್ಟ್‌ನಲ್ಲಿ ತಪಾಸಣೆ ನಡೆಸಲು ನಿರ್ಧರಿಸಲಾಗಿದೆ. ಬಳಿಕ ೫ ವಾಹಗಳನ್ನು ಒಟ್ಟಾಗಿ ಸಂಚರಿಸಲು ಅನುಮತಿ ನೀಡಲಾಗುತ್ತದೆ ಎಂದು ತಿಳಿಸಿದ್ದಾರೆ.

*********

ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತವಾಗಿರುವುದರಿಂದ ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿನ್ನೆಯಿಂದ ಧಾರಾಕಾರ ಮಳೆಯಾಗುತ್ತಿದ್ದು, ಇಂದು ಕೂಡ ಮುಂದುವರಿದಿದೆ. ನಿರಂತರ ಮಳೆಯ ಹಿನ್ನೆಲೆಯಲ್ಲಿ ಇಂದು ಜಿಲ್ಲೆಯ ಮಂಗಳೂರು, ಪುತ್ತೂರು, ಬಂಟ್ವಾಳ, ಮುಲ್ಕಿ-ಮೂಡುಬಿದಿರೆ ಮತ್ತು ಉಳ್ಳಾಲ ತಾಲೂಕಿನ ಎಲ್ಲಾ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ಆರಂಭದಿಂದಲೂ ಉತ್ತಮ ಮಳೆಯಾಗಿದೆ. ಭಾರೀ ಗಾಳಿ ಮಳೆಯ ಕಾರಣ ಅಲ್ಲಲ್ಲಿ ಪ್ರಾಕೃತಿಕ ವಿಕೋಪ ಸಂಭವಿಸಿ ಸಾಕಷ್ಟು ಆಸ್ತಿ ಪಾಸ್ತಿ ನಷ್ಟ ಉಂಟಾಗಿದೆ. ಏಪ್ರಿಲ್ ೧ ರಿಂದ ನಿನ್ನೆಯವರೆಗೆ ೧ ಸಾವಿರದ ೬೦೭ ಮನೆಗಳಿಗೆ ಹಾನಿ ಉಂಟಾಗಿದೆ. ಈ ಪೈಕಿ ೧೫೪ ಮನೆಗಳು ಸಂಪೂರ್ಣ ಹಾನಿಯಾಗಿವೆ. ೩ ಸಾವಿರದ ೩೦೨ ಹೆಕ್ಟೇರ್ ಕೃಷಿ ಮತ್ತು ೧೭ ಸಾವಿರದ ೨೪೫ ಹೆಕ್ಟೇರ್ ಪ್ರದೇಶದಲ್ಲಿನ ತೋಟಗಾರಿಕಾ ಬೆಳೆಗಳಿಗೆ ಹಾನಿ ಉಂಟಾಗಿದೆ. ೭ ಸಾವಿರದ ೭೨೫ ವಿದ್ಯುತ್ ಕಂಬಗಳು ಧರೆಗುರುಳಿದ್ದು, ೨೬೩ ಟ್ರಾನ್ಸ್‌ಫಾರ್ಮರ್‌ಗಳು ಹಾನಿಗೊಂಡಿವೆ. ೩೦೦

ಕಿಲೋಮೀಟರ್ ಉದ್ದದ ರಸ್ತೆಗಳು ಹದಗೆಟ್ಟಿವೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಶಿವಮೊಗ್ಗ ಜಿಲ್ಲೆಯಲ್ಲೂ ಮಳೆಯಾಗುತ್ತಿದ್ದು, ಲಿಂಗನಮಕ್ಕಿ ಜಲಾಶಯದ ಎಲ್ಲಾ ಗೇಟುಗಳನ್ನು ಮೇಲೆತ್ತಲಾಗಿದೆ. ಇದರಿಂದ ಶರಾವತಿ ನದಿಯಲ್ಲಿ ಪುನಃ ನೀರಿನ ಹರಿವು ಹೆಚ್ಚಳವಾಗಿದೆ. ಜೋಗ ಜಲಪಾತವು ಮೈ ದುಂಬಿ ಹರಿಯುತ್ತಿದೆ. ಲಿಂಗನಮಕ್ಕಿ ಜಲಾಶಯಕ್ಕೆ ಇವತ್ತು ೪೭ ಸಾವಿರದ ೨೩೨ ಕ್ಯೂಸೆಕ್ ಒಳ ಹರಿವು ಇದೆ. ದಾವಣಗೆರೆ ಜಿಲ್ಲಾದ್ಯಂತ ವ್ಯಾಪಕ ಮಳೆ ಮುಂದುವರಿದಿದ್ದು, ಕೃಷಿ ಚಟುವಟಿಕೆಗಳಿಗೆ ಅಡ್ಡಿ ಉಂಟಾಗಿದೆ. ನಿರಂತರ ಮಳೆಯಿಂದ ತರಕಾರಿ ಬೆಳಗಳು ಗಿಡದಲ್ಲಿಯೇ ಕೊಳೆತು ಹೋಗುತ್ತಿವೆ. ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಜಗಳೂರು ಮತ್ತು ದಾವಣಗೆರೆ ತಾಲ್ಲೂಕಿನ ಹಲವು ಕೆರೆಗಳು ಸಂಪೂರ್ಣ ಭರ್ತಿಯಾಗಿವೆ. ಮುಂಗಾರು ಹಂಗಾಮಿನಲ್ಲಿ ಮಳೆಯಿಂದ ಆದ ಬೆಳೆನಷ್ಟ ಪರಿಹಾರವಾಗಿ ದಾವಣಗೆರೆ ಜಿಲ್ಲೆಗೆ ೮ ಕೋಟಿ ರೂಪಾಯಿ ಪರಿಹಾರ ಬಿಡುಗಡೆಯಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆಯಾದ್ಯಂತ ಆಗಸ್ಟ್ ೨೮ ರಂದು ಅಂಗನವಾಡಿ, ಶಾಲಾ, ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ.

*********

ಪಿಎಂ ಜನ್-ಧನ್ ಯೋಜನೆಗೆ ೧೧ ವರ್ಷ ಪೂರ್ಣಗೊಂಡಿದೆ. ಕಳೆದ ೧೧ ವರ್ಷಗಳಲ್ಲಿ ೫೬ ಕೋಟಿ ೧೬ ಲಕ್ಷಕ್ಕೂ ಅಧಿಕ ಬ್ಯಾಂಕ್ ಖಾತೆಗಳನ್ನು ತೆರೆಯಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಈ ಪೈಕಿ ಶೇಕಡ ೬೭ರಷ್ಟು ಗ್ರಾಮೀಣ ಹಾಗೂ ಶೇಕಡ ೩೩ರಷ್ಟು ನಗರದ ಪ್ರದೇಶಗಳಲ್ಲಿ ಖಾತೆ ತೆರೆಯಲಾಗಿದೆ. ಇದರಲ್ಲಿ ಶೇಕಡ ೫೬ರಷ್ಟು ಖಾತೆಗಳು ಮಹಿಳೆಯರದ್ದಾಗಿದೆ. ಜನ್ ಧನ್ ಖಾತೆಗಳಿಗೆ ಈವರೆಗೆ ೪೫ ಲಕ್ಷ ಕೋಟಿ ರೂಪಾಯಿಗಳ ನೇರ ನಗದು ವರ್ಗಾವಣೆ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ. ಜನ್ ಧನ್ ಖಾತೆ ತೆರೆದಿರುವುದರಿಂದ ವ್ಯವಹರಿಸಲು ತುಂಬಾ ಅನುಕೂಲವಾಗಿದೆ ಎಂದು ಕೋಲಾರದ ಚಂಜಿಮಲೆ ಗ್ರಾಮದ ಫಲಾನುಭವಿ ಕಿರಣ್ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

*********

ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಈವರೆಗೆ ಸಂಚಾರಿ ಟ್ಯಾಂಕರ್ ಹಾಗೂ ಕೆರೆಗಳಲ್ಲಿ ಎರಡು ಲಕ್ಷದ ೧೯ ಸಾವಿರ ಗಣಪತಿ ಮೂರ್ತಿಗಳನ್ನು ವಿಸರ್ಜನೆ ಮಾಡಲಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ ತಿಳಿಸಿದ್ದಾರೆ. ಪೂರ್ವ ವಲಯ ೪೪ ಸಾವಿರ, ಪಶ್ಚಿಮ ವಲಯ ೬೦ ಸಾವಿರದ ೭೦೩, ದಕ್ಷಿಣ ವಲಯ ೭೯ ಸಾವಿರದ ೩೯, ಬೊಮ್ಮನಹಳ್ಳಿ ವಲಯದಲ್ಲಿ ೭ ಸಾವಿರ

೨೮, ದಾಸರಹಳ್ಳಿ ವಲಯ ಒಂದು ಸಾವಿರದ ೧೦೪, ಮಹದೇವಪುರ ವಲಯ ೫ ಸಾವಿರದ ೬೯೦, ಆರ್.ಆರ್.ನಗರ ವಲಯ ೧೩ ಸಾವಿರದ ೯೭, ಯಲಹಂಕ ವಲಯ ೮ ಸಾವಿರದ ೪೯೨ ಸೇರಿದಂತೆ ಒಟ್ಟು ೨ ಲಕ್ಷದ ೧೯ ಸಾವಿರದ ೧೫೩ ಮೂರ್ತಿಗಳನ್ನು ವಿಸರ್ಜಿಸಲಾಗಿದೆ.

*********

ಪ್ರಧಾನಿ ನರೇಂದ್ರ ಮೋದಿ ಅವರ ಮನ್ ಕೀ ಬಾತ್ ಕಾರ್ಯಕ್ರಮವು ಇದೇ ಭಾನುವಾರ ಬೆಳಿಗ್ಗೆ ೧೧ ಗಂಟೆಗೆ ಪ್ರಸಾರವಾಗಲಿದೆ.  ಪ್ರಧಾನಿ ಅವರು ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೫ನೇ ಸಂಚಿಕೆಯಾಗಲಿದೆ. ಜನರು ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಕಾರ್ಯಕ್ರಮಕ್ಕಾಗಿ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ನೀಡಬಹುದು. ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈಗೌ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಗೆ ಸಲಹೆಗಳನ್ನು ನಾಳೆ ರವರೆಗೆ ಸ್ವೀಕರಿಸಲಾಗುತ್ತದೆ.

*********

ಮೈಸೂರಿನ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ನಡೆಯಲಿರುವ ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್‌ನಲ್ಲಿ ಇಂದು ಹುಬ್ಬಳ್ಳಿ ಟೈಗರ್ಸ್ ಮತ್ತು ಮಂಗಳೂರು ಡ್ರ್ಯಾಗನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಕ್ವಾಲಿಫೈಯರ್-೨ರಲ್ಲಿ ಮಂಗಳೂರು ಡ್ರ್ಯಾಗನ್ಸ್, ಬೆಂಗಳೂರು ತಂಡವನ್ನು ಸೋಲಿಸಿ, ಫೈನಲ್ ಪ್ರವೇಶಿಸಿದೆ. ಕ್ವಾಲಿಫೈಯರ್-೧ರಲ್ಲಿ ಮಂಗಳೂರು ಡ್ರ್ಯಾಗನ್ಸ್ ತಂಡವನ್ನು ಮಣಿಸಿದ ಹುಬ್ಬಳ್ಳಿ ಟೈಗರ್ಸ್ ಫೈನಲ್ ತಲುಪಿದೆ. ಇಂದಿನ ಫೈನಲ್ ಪಂದ್ಯ ಸಂಜೆ ೬.೩೦ಕ್ಕೆ ಆರಂಭವಾಗಲಿದೆ.

*****END****